2. ಈ ಮೃಗಾಲಯವನ್ನು ಹಂತಹಂತವಾಗಿ ಅಭಿವೃದ್ಧಿಪಡಿಸುವ ಕಾರ್ಯಕ್ರಮವನ್ನು ಹೊಂದಲಾಗುವುದು.

ವಿಷಯ:- ಜಿಲ್ಲಾ ಯೋಜನಾ ಮಂಡಳಿಗಳ ರಚನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 147 (457)

ಶ್ರೀ ಡಿ.ಆರ್.ಪಾಟೀಲ್ (ಗದಗ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಅಸ್ತಿತ್ವಕ್ಕೆ ಬಂದು ಸುಮಾರು ಒಂದು ವರ್ಷವಾಗುತ್ತ ಬಂದರೂ ಸಹ ಜಿಲ್ಲಾ ಯೋಜನಾ ಮಂಡಳಿಗಳನ್ನು ರಚಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಆ) ಇಷ್ಟು ದೀರ್ಘ ಕಾಲದಿಂದ ಜಿಲ್ಲಾ ಯೋಜನಾ ಮಂಡಳಿ ರಚಿಸುವಲ್ಲಿ ವಿಳಂಬವಾಗಿರುವುದಕ್ಕೆ ಹೊಣೆಗಾರರು ಯಾರು?

ಇ) ಈ ವಿಳಂಬದಿಂದಾಗಿ ಜಿಲ್ಲಾ ಯೋಜನೆಗಳನ್ನು ರೂಪಿಸುವಾಗ ಜನಪ್ರತಿನಿಧಿಗಳನ್ನು ಯೋಜನೆಗಳನ್ನು ರೂಪಿಸುವಾಗ ಪ್ರಕ್ರಿಯೆಯಿಂದ ದೂರವಿರಿಸಿದಂತೆ ಆಗುವುದಿಲ್ಲವೇ?

ಈ) ಸರ್ಕಾರದವರು ಈಗಲಾದರೂ ಜಿಲ್ಲಾ ಯೋಜನಾ ಮಂಡಳಿಗಳನ್ನು ರಚಿಸಲು ತ್ವರಿತ ಕ್ರಮ ಕೈಗೊಳ್ಳುವರೇ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಸಚಿವರು):-

ಅ ಮತ್ತು ಆ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ 310ರಡಿ ಪ್ರತಿ ಜಿಲ್ಲೆಗೆ ಒಂದು ಜಿಲ್ಲಾ ಯೋಜನಾ ಸಮಿತಿಯನ್ನು ರಚಿಸಬೇಕಾಗಿದೆ. ಈ ಬಗ್ಗೆ ನಿಯಮಗಳನ್ನು ರಚಿಸಲು ಕಾನೂನು ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ. ಈ ಮಧ್ಯೆ ಶ್ರೀ ಪಿ.ಆರ್.ನಾಯಕ್‌ರವರ ಅಧ್ಯಕ್ಷತೆಯಲ್ಲಿ ರಚಿಸಿದ್ದ ತಜ್ಞರ ಸಮಿತಿಯು ತನ್ನ ವರದಿಯಲ್ಲಿ ಜಿಲ್ಲಾ ಯೋಜನಾ ಸಮಿತಿಗಳ ರಚನೆಯ ಬಗ್ಗೆ ಕೆಲವೊಂದು ಸಲಹೆಗಳನ್ನು ಮಾಡಿದೆ. ಈ ಸಲಹೆಗಳನ್ನು ಕೂಡಾ ಪರಿಗಣನೆಗೆ ತೆಗೆದುಕೊಂಡು ಜಿಲ್ಲಾ ಯೋಜನಾ ಸಮಿತಿಗಳನ್ನು ರಚಿಸುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆ.

ಇ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಪ್ರಕಾರ ವಾರ್ಷಿಕ ಯೋಜನೆಗಳನ್ನು ರೂಪಿಸುವುದು ಆಯಾ ಪಂಚಾಯಿತಿಯ ಜವಾಬ್ದಾರಿಯಾಗಿರುತ್ತದೆ. ಚುನಾಯಿತ ಸದಸ್ಯರ ವಾರ್ಷಿಕ ಮತ್ತು ಕ್ರಿಯಾ ಯೋಜನೆಗಳನ್ನು ತಯಾರಿಸುವುದರಿಂದ ಯೋಜನೆಗಳನ್ನು ರೂಪಿಸುವಾಗ ಜನಪ್ರತಿನಿಧಿಗಳು ಈ ಕಾರ್ಯದಲ್ಲಿ ಭಾಗವಹಿಸುತ್ತಿದ್ದಾರೆ.

ಈ) ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ:- ಖಾಸಗೀ ಹಾಗೂ ಅನುದಾನ ಪಡೆಯುತ್ತಿರುವ ಪದವಿಪೂರ್ವ ಕಾಲೇಜುಗಳಲ್ಲಿ ಮೀಸಲಾತಿ ಪ್ರಕಾರ ಪ್ರವೇಶ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 149 (476)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಇರುವ ಖಾಸಗೀ ಹಾಗೂ ಅನುದಾನ ಪಡೆಯುತ್ತಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಒಟ್ಟು ಸೀಟುಗಳೆಷ್ಟು?

ಇ) ಈ ಕಾಲೇಜುಗಳಲ್ಲಿ ಕಡಿಮೆ ಅಂಶಗಳನ್ನು ಪಡೆದಂಥ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಪ್ರತಿಯೊಂದು ಖಾಸಗೀ ಹಾಗೂ ಅನುದಾನ ಪಡೆಯುತ್ತಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ಮೀಸಲಾತಿಯ ಪ್ರಕಾರ ಪ್ರವೇಶಾವಕಾಶವನ್ನು ಬದಲಿಸಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಶ್ರೀ ಹೆಚ್.ಸಿ.ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಒಟ್ಟು 139 ಖಾಸಗಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಿವೆ.

ಅನುದಾನಸಹಿತ - 48 ಕಾಲೇಜುಗಳು.

ಅನುದಾನರಹಿತ - 91 ಕಾಲೇಜುಗಳು.

ಆ) ಒಟ್ಟು 25000 ಸೀಟುಗಳಿವೆ.

ಇ) ಬಂದಿಲ್ಲ.

ಈ) ಸರ್ಕಾರ ಹೊರಡಿಸಿರುವ ಮೀಸಲಾತಿಯ ಆದೇಶದ ಪ್ರಕಾರ ದಾಖಲಾತಿ ಮಾಡಿಕೊಳ್ಳಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗಿದೆ.

ವಿಷಯ:- ಬೆಂಗಳೂರಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣದ ಪಠ್ಯ ಪುಸ್ತಕಗಳ ಕೊರತೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 150 (477)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?